# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1212 |
| 2) | ಸದಸ್ಯರ ಹೆಸರು | ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 22-09-2021 |
| 4) | ಉತ್ತರಿಸಬೇಕಾದ ಸಚಿವರು | ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ (ಕರಾವಳಿ) ಜಿಲ್ಲೆಗಳಲ್ಲಿ ಮೀನುಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳಿಸಿದ ಯೋಜನೆಗಳಾವುವು; (ಸಂಪೂರ್ಣವಾದ ಮಾಹಿತಿ ನೀಡುವುದು) | ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ (ಕರಾವಳಿ) ಜಿಲ್ಲೆಗಳಲ್ಲಿ ಮೀನುಗಾರಿಕೆ ಇಲಾಖೆಯಿಂದ ಅನುಷ್ಠಾನಗೊಂಡಿರುವ ಯೋಜನೆಗಳ ವಿವರಗಳನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ. |
| ಆ) | ಸದರಿ ಜಿಲ್ಲೆಗಳಲ್ಲಿ 2017-2018, 2018-2019, 2019-2020, 2020-21, 2021-22ನೇ ಸಾಲಿನಲ್ಲಿ ಮತ್ಸ್ಯ ಯೋಜನೆ ಅಡಿಯಲ್ಲಿ ಮಂಜೂರಾಗಿರುವ ಮನೆಗಳೆಷ್ಟು; | ಸದರಿ ಜಿಲ್ಲೆಗಳಲ್ಲಿ ಮತ್ಸ್ಯಾಶ್ರಯ ಯೋಜನೆ ಅಡಿಯಲ್ಲಿ ಮಂಜೂರಾಗಿರುವ ಮನೆಗಳ ವಿವರ ಕೆಳಕಂಡಂತಿದೆ:- (ಕೆಳಗಿನ ಕೋಷ್ಟಕ) |
| ಇ) | ಸದರಿ ಜಿಲ್ಲೆಗಳಲ್ಲಿ ಮೀನು ಉತ್ಪಾದನೆ ಹೆಚ್ಚಿಸುವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣವಾದ ಮಾಹಿತಿ ನೀಡುವುದು) | ಸದರಿ ಜಿಲ್ಲೆಗಳಲ್ಲಿ ಮೀನು ಉತ್ಪಾದನೆ ಹೆಚ್ಚಿಸುವುದಕ್ಕೆ ಸರ್ಕಾರದಿಂದ ಕೈಗೊಂಡ ಕ್ರಮಗಳ ವಿವರಗಳನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ. |

| ಜಿಲ್ಲೆ | ಮಂಜೂರಾದ ಮನೆಗಳ ಸಂಖ್ಯೆ | | | | |
|---|---|---|---|---|---|
| | 2017-18 | 2018-19 | 2019-20 | 2020-21 | 2021-22 |
| ದಕ್ಷಿಣ ಕನ್ನಡ | 36 | 305 | - | - | - |
| ಉಡುಪಿ | 254 | 640 | - | - | - |
| ಉತ್ತರ ಕನ್ನಡ | 70 | 175 | - | - | - |

| | | |
|---|---|---|
| ಈ) | ಸದರಿ ಜಿಲ್ಲೆಗಳಲ್ಲಿ ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ ಮಂಜೂರು ಮಾಡಿರುವ ಫಲಾನುಭವಿಗಳ ಆಯ್ಕೆಗೆ ಅನುಸರಿಸಲಾಗಿರುವ ಮಾನದಂಡಗಳೇನು? (ಸಂಪೂರ್ಣವಾದ ಮಾಹಿತಿ ಒದಗಿಸುವುದು) | ಮತ್ಸ್ಯಾಶ್ರಯ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಸರಿಸುತ್ತಿರುವ ಮಾನದಂಡಗಳು ಈ ಕೆಳಗಿನಂತಿರುತ್ತವೆ.<br><br>1) ಫಲಾನುಭವಿಯು ಹುಟ್ಟು/ವೃತ್ತಿಯಲ್ಲಿ ಮೀನುಗಾರನಾಗಿರಬೇಕು. ಮೀನುಗಾರಿಕೆಗೆ ಪೂರಕವಾದ ಚಟುವಟಿಕೆಗಳಲ್ಲಿ ತೊಡಗಿರುವವರನ್ನು ಸಹ ಆಯ್ಕೆ ಮಾಡಬಹುದಾಗಿದೆ.<br><br>2) ಫಲಾನುಭವಿಯು ವಿವಾಹಿತನಾಗಿರಬೇಕು.<br><br>3) ಫಲಾನುಭವಿಯು ಸ್ವಂತ ನಿವೇಶನ ಹೊಂದಿರತಕ್ಕದ್ದು.<br><br>4) ಫಲಾನುಭವಿಯು ಸ್ಥಳೀಯ ಮೀನುಗಾರರ ಸಹಕಾರ ಸಂಘದ ಸದಸ್ಯನಾಗಿರಬೇಕು. ಇಲ್ಲದಿದ್ದಲ್ಲಿ ಕಳೆದ ಮೂರು ವರ್ಷಗಳಿಂದ ಮೀನುಗಾರಿಕೆಯಲ್ಲಿ ತೊಡಗಿರುವ ಬಗ್ಗೆ ಸಂಬಂಧಿಸಿದ ಮೀನುಗಾರಿಕೆ ಸಹಾಯಕ ನಿರ್ದೇಶಕರು ರವರು ದೃಢೀಕರಿಸಬೇಕು.<br><br>5) ಫಲಾನುಭವಿಯು ಸರ್ಕಾರದ ಇತರೆ ವಸತಿ ಯೋಜನೆಯಡಿ ಸೌಲಭ್ಯವನ್ನು ಪಡೆದಿರಬಾರದು. ಈ ಬಗ್ಗೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿ, ಮುನಿಸಿಪಾಲಿಟಿ, ನಗರಸಭೆ ಮುಂತಾದ ಸಂಸ್ಥೆಗಳಿಂದ ದೃಢೀಕರಣ ಹೊಂದಿರತಕ್ಕದ್ದು.<br><br>6) ಫಲಾನುಭವಿಯು ಆರ್ಥಿಕವಾಗಿ ಹಿಂದುಳಿದವರಾಗಿರತಕ್ಕದ್ದು. |

ಸಂಖ್ಯೆ: ಪಸಂಮೀ ಇ-262 ಮೀಇಯೋ 2021

(ಎಸ್. ಅಂಗಾರ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 1212ರ

ಅನುಬಂಧ-01

**ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಇಲಾಖೆಯಿಂದ ಅನುಷ್ಠಾನಗೊಂಡಿರುವ ಯೋಜನೆಗಳ ವಿವರ**

1. **ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಗೆ ಪ್ರೋತ್ಸಾಹ:** ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುತ್ತಿದೆ.

2. **ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ**

ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನು ಮರಿ (Advanced fingerlings) ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುಲಾಗುತ್ತಿದೆ. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುತ್ತಿದೆ.

2. **ನೀಲಿ ಕ್ರಾಂತಿ/ PMMSY – ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (ಕೇಂದ್ರ ಪುರಸ್ಕೃತ ಯೋಜನೆ)**

ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಯೋಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ನೂತನ ತಂತ್ರಜ್ಞಾನ ಅಳವಡಿಕೆ, ಹಿಡುವಳಿ ನಂತರದ ಶೀತಲ ಸರಪಳಿ ಮೂಲ ಸೌಕರ್ಯ, ಮೀನು ಆಹಾರ ತಯಾರಿಕಾ ಘಟಕ, ಮೀನುಮಾರುಕಟ್ಟೆಗಳು ಮತ್ತು ಮಾರಾಟ ಮೂಲ ಸೌಕರ್ಯಗಳಿಗೆ ಸಹಾಯಧನ ನೀಡಲಾಗುತ್ತಿದೆ. ಸದರಿ ಯೋಜನೆಯಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ.40 ರಷ್ಟು ಸಹಾಯಯಧನ ಹಾಗೂ ಮಹಿಳೆಯರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ. 60 ರಷ್ಟು ಸಹಾಯಯಧನವನ್ನು ನೀಡಲಾಗುತ್ತಿದೆ.

3. **ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು :**

ಸಂಕಷ್ಟ ಪರಿಹಾರ ನಿಧಿಗೆ ಸರ್ಕಾರದಿಂದ ಮೂಲ ಬಂಡವಾಳ ನೀಡುವ ಸಲುವಾಗಿ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ನಿಧಿಯಿಂದ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.3.00 ಲಕ್ಷ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1.00 ಲಕ್ಷ ಪರಿಹಾರ ನೀಡಲು ಹಾಗೂ ಬಲೆಹಾನಿ, ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ.1.00 ಲಕ್ಷ ಮೀನುಗಾರಿಕೆ ಬಂದರು/ ಇಳಿದಾಣ ಕೇಂದ್ರದಲ್ಲಿ ಕೆಲಸದಲ್ಲಿದ್ದಾಗ ಮರಣ ಹೊಂದಿದಲ್ಲಿ ರೂ.1.00 ಲಕ್ಷ, ಸಮುದ್ರದಲ್ಲಿ ಮೀನುಗಾರಿಕೆಗೆ ಹೋದಾಗ ಅನಾರೋಗ್ಯದಿಂದ ಮರಣ ಹೊಂದಿದಲ್ಲಿ ರೂ.2.00 ಲಕ್ಷ ನೆರವು ನೀಡಲು ಅವಕಾಶವಿದೆ. ಸಮುದ್ರದಲ್ಲಿ ಮೀನುಗಾರಿಕೆ ಮಾಡುವಾಗ ಪ್ರಕೃತಿ ವಿಕೋಪದಿಂದ ದೋಣಿ ಅವಘಡದಿಂದ ಮೃತರಾದ ಮೀನುಗಾರರ ಕುಟುಂಬದವರಿಗೆ ರೂ 6.00 ಲಕ್ಷ ಪರಿಹಾರ ನೀಡಲಾಗುತ್ತಿದೆ.

4. **ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:**

ಸಾಂಪ್ರದಾಯಿಕ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮೆ ಎಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ.

5. **ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟ ತೆರಿಗೆ ಮರುಪಾವತಿ**

2021-22ನೇ ಸಾಲಿನಿಂದ ಯಾಂತ್ರೀಕೃತ ದೋಣಿಗಳಿಗೆ 1.5 ಲಕ್ಷ ಕಿಲೋಲೀಟರ್ ಡೀಸೆಲ್ ಡೆಲಿವರಿ ಪಾಯಿಂಟ್‌ನಲ್ಲಿಯೇ ಕರರಹಿತ ದರದಲ್ಲಿ ವಿತರಿಸುವುದು ಈ ಯೋಜನೆಯ ಉದ್ದೇಶವಾಗಿದೆ.

6. **ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ**

a. ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗುತ್ತಿದೆ.

b. ಮೀನು ಮರಿಗಳನ್ನು ಹಿಡಿಯುವುದನ್ನು ತಪ್ಪಿಸಿ ಮತ್ಸ್ಯ ಸಂಪತ್ತನ್ನು ರಕ್ಷಿಸಲು ಮೀನುಗಾರರಿಗೆ ಕಾಡ್ ಎಂಡ್‌ನಲ್ಲಿ 35 ಎಂಎಂ ಸ್ಕ್ವೇರ್ ಮೆಶ್ ಬಲೆಗಳನ್ನು ಉಚಿತವಾಗಿ ನೀಡಲು ಉದ್ದೇಶಿಸಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗುತ್ತಿದೆ.

c. ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/- ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾಗುತ್ತಿದೆ.

7. **ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ**

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಮೇಲೆ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.50 ಲಕ್ಷ ಸಹಾಯಧನ ನೀಡಲಾಗುತ್ತಿದೆ.

8. **ಮೀನುಗಾರರ ಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ)**

**ಅ) ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ**

ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ.4500/- ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುತ್ತಿದೆ.

ಆ) ಸಾಮೂಹಿಕ ವಿಮಾ ಯೋಜನೆ:

ರಾಜ್ಯದ 2.04 ಲಕ್ಷ ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.200,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.100,000 ಗಳ ಪರಿಹಾರ ನೀಡಲಾಗುವುದು. ವಿಮಾ ಕಂತಿನ ಹಣ ಪ್ರತಿ ವರ್ಷ ದೆಹಲಿಯಲ್ಲಿರುವ ಮೀನುಗಾರರ ಸಹಕಾರ ಸಂಘಗಳ ರಾಷ್ಟ್ರೀಯ ಮಂಡಳಿ, ದೆಹಲಿಗೆ ಬಿಡುಗಡೆ ಮಾಡಲಾಗುತ್ತಿದೆ.

9. ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು

ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.

ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲು ಪ್ರಸ್ತಾವಿಸಲಾಗಿದೆ.

10. ಮೀನುಗಾರಿಕೆ ಕೂಡು ರಸ್ತೆಗಳ ನಿರ್ವಹಣೆ

ರಾಜ್ಯದ ಕರಾವಳಿಯ ಮೂರು ಜಿಲ್ಲೆಗಳಲ್ಲಿ ಒಟ್ಟು 355.13 ಕಿಮೀ ಉದ್ದದ 218 ಮೀನುಗಾರಿಕೆ ಕೊಂಡಿ ರಸ್ತೆಗಳಿರುತ್ತವೆ. ಮಳೆ ಹಾಗೂ ಮೀನು ಸಾಗಾಣಿಕೆಯಿಂದ ಈ ಮೀನುಗಾರಿಕೆ ಕೊಂಡಿ ರಸ್ತೆಗಳು ಹಾಳಾಗುತ್ತದೆ. ಇವುಗಳ ದುರಸ್ತಿ ಹಾಗೂ ನಿರ್ವಹಣೆಯನ್ನು ಕೈಗೊಳ್ಳಲಾಗುತ್ತಿದೆ.

11. ಗಿರಿ ಜನ ಉಪ ಯೋಜನೆ

ಈ ಯೋಜನೆಯಡಿ ಪರಿಶಿಷ್ಠ ಪಂಗಡದ ಮೀನುಗಾರರಿಗೆ ಅನುಕೂಲವಾಗುವಂತೆ ಸಂಚಾರಿ/ ರೀಟೇಲ್ ಮೀನು ಖಾದ್ಯಗಳ ಕ್ಯಾಂಟೀನ್/ ತಾಜಾ ಮೀನು ಮಾರಾಟ ಮಳಿಗೆ ಸ್ಥಾಪಿಸಲು ಸಹಾಯ (ಘಟಕ ವೆಚ್ಚ ರೂ.10.00 ಲಕ್ಷ ; ಸಹಾಯಧನ : ಶೇ.70 ರಷ್ಟು ಗರಿಷ್ಠ ರೂ.7.00 ಲಕ್ಷ) ನೆರವು ನೀಡಲಾಗುತ್ತಿದೆ.

12. ಮೀನುಗಾರಿಕೆ ಬಂದರುಗಳು ಮತ್ತು ಇಳಿದಾಣ ಕೇಂದ್ರಗಳ ಅಭಿವೃದ್ಧಿ- ಬಂಡವಾಳ ಹೂಡಿಕೆಗಳು

ಸದರಿ ಯೋಜನೆಗಳಯಡಿ ಮೀನುಗಾರಿಕೆ ಬಂದರುಗಳು ಮತ್ತು ಇಳಿದಾಣ ಕೇಂದ್ರಗಳಲ್ಲಿ ಮೀನುಗಾರಿಕೆ ದೋಣಿಗಳ ಸುಗಮ ಸಂಚಾರಕ್ಕೆ ಅನುಕೂಲವಾಗಲು ಹೂಳೆತ್ತಲು ಮತ್ತು ಮೀನುಗಾರಿಕೆ ಬಂದರುಗಳ, ಇಳಿದಾಣ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು ನಬಾರ್ಡ್ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ, ಶುಚಿಯಾದ ಮೀನುಮಾರುಕಟ್ಟೆಗಳ ನಿರ್ಮಾಣ, ಮೀನು ಮರಿ ಉತ್ಪಾದನಾ ಕೇಂದ್ರಗಳ ಆಧುನೀಕರಣ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಸರ್ಕಾರದಿಂದ ಮಂಜೂರಾದ ಕಾಮಗಾರಿಗಳನ್ನು ಅನುಷ್ಠಾನಮಾಡಲಾಗುತ್ತಿದೆ.

## ಜಿಲ್ಲಾ ಪಂಚಾಯತ್ ಯೋಜನೆಗಳು

1. ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ

ಈ ಲೆಕ್ಕ ಶೀರ್ಷಿಕೆಯಡಿ ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗುತ್ತಿದೆ..

2. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಹಾಗೂ ಮೊದಲ ವರ್ಷದ ಆವರ್ತಕ ವೆಚ್ಚದ ಶೇಕಡ 25 ರಷ್ಟು ಅಂದರೆ ಗರಿಷ್ಠ ರೂ.30,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ರೂ.10,000.00 ಗಳ ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.5000 ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 250 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುತ್ತಿದೆ.

3. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ ಗರಿಷ್ಠ ರೂ.2000 ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.10000/- ಗಳ ಸಹಾಯಧನವನ್ನು ನೀಡಲಾಗುತ್ತಿದೆ..

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.35,000 ಗಳ ಸಹಾಯಧನವನ್ನು ಮೂರು ಅಥವಾ ನಾಲ್ಕು ಫಲಾನುಭವಿಗಳ ಒಂದು ಗುಂಪಿಗೆ ನೀಡಲಾಗುತ್ತಿದೆ.

4.ಪ್ರದರ್ಶನ ಮತ್ತು ತರಬೇತಿ

ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುತ್ತಿದೆ.

ಈ ಯೋಜನೆಗಳಲ್ಲದೆ ಮೀನುಗಾರಿಕೆ ಇಲಾಖೆಯಿಂದ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ:**

  ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ಇತರೆ ಮೂಲಭೂತ ಸೌಲಭ್ಯಗಳ ಉನ್ನತೀಕರಣ, ಮೀನುಗಾರಿಕೆ ಸಲಕರಣೆ ಕಿಟ್ ವಿತರಣೆ, ಫೈಬರ್ ಗ್ಲಾಸ್ ಹರಿಗೋಲು ವಿತರಣೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

- **ಕೆರೆಗಳ ಅಭಿವೃದ್ಧಿ:**

  ರಾಜ್ಯದಲ್ಲಿರುವ ಒಳನಾಡು ಜಲಸಂಪನ್ಮೂಲಗಳನ್ನು ಅಭಿವೃದ್ಧಿ ಪಡಿಸಲು ಹೊಸ ಗುತ್ತಿಗೆ ನಿಯಮಾವಳಿಗಳನ್ನು ರೂಪಿಸಿದ್ದು, ಈ ನಿಯಮಾವಳಿ ಪ್ರಕಾರ ಈ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕಿನ ಗುತ್ತಿಗೆಯನ್ನು ಪಡೆಯಲು ನೋಂದಾಯಿಸಲ್ಪಟ್ಟ ಮೀನುಗಾರರ ಸಹಕಾರ ಸಂಘಗಳಿಗೆ ಅವಕಾಶ ಕಲ್ಪಿಸಲಾಗಿದೆ. ಗುತ್ತಿಗೆಗೆ ಕೋರದ ಕೆರೆಗಳನ್ನು ಸಾರ್ವಜನಿಕವಾಗಿ ಟೆಂಡರ್ ಕಂ ಹರಾಜು ಮೂಲಕ ವಿಲೇವಾರಿ ಮಾಡಿ ಅಭಿವೃದ್ಧಿಪಡಿಸಲಾಗುವುದು. ಕೆರೆಗಳ ಶೇ.50ರ ಜಲ ವಿಸ್ತೀರ್ಣವನ್ನು ಗಣನೆಗೆ ತೆಗೆದುಕೊಂಡು ಪ್ರತಿ ಹೆಕ್ಟೇರ್ ಜಲ ವಿಸ್ತೀರ್ಣಕ್ಕೆ ರೂ.300/- ರಂತೆ ಹಾಗೂ ಹಿಂದಿನ 3 ವರ್ಷಗಳ ಸರಾಸರಿ ಗುತ್ತಿಗೆ ಮೊತ್ತ, ಇವುಗಳಲ್ಲಿ ಯಾವುದು ಹೆಚ್ಚೋ ಮೊತ್ತವನ್ನು ಗುತ್ತಿಗೆ ಮೊತ್ತವಾಗಿ ನಿಗದಿಪಡಿಸಿ ಗರಿಷ್ಠ 5 ವರ್ಷಗಳ ಅವಧಿಗೆ ಮೀನುಕೃಷಿಗೆ ನೀಡಲಾಗುತ್ತಿದೆ.

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 12/28

ಅನುಬಂಧ-02

## ಕರಾವಳಿ ಜಿಲ್ಲೆಗಳಲ್ಲಿ ಮೀನು ಉತ್ಪಾದನೆ ಹೆಚ್ಚಿಸುವುದಕ್ಕೆ ಸರ್ಕಾರದಿಂದ ಕೈಗೊಂಡ ಕ್ರಮಗಳ ವಿವರ

ಮೀನು ಉತ್ಪಾದನೆಯನ್ನು ಹೆಚ್ಚಿಸಲು ಈ ಕೆಳಕಂಡ ಯೋಜನೆಗಳನ್ನು ಕರಾವಳಿ ಜಿಲ್ಲೆಗಳಲ್ಲಿ ಕೈಗೋಳ್ಳಲಾಗಿದೆ.

1. **"ಮತ್ಸ್ಯ ಕೃಷಿ ಆಶಾ ಕಿರಣ"** ಯೋಜನೆಯಡಿ ಕೆರೆಗಳಲ್ಲಿ ಮೀನು ಉತ್ಪಾದನೆಯನ್ನು ಹೆಚ್ಚಿಸಲು ಹಾಗೂ ಮೀನು ಕೃಷಿಗೆ ಉತ್ತೇಜನ ನೀಡಲು, ಪ್ರತಿ ಹೆಕ್ಟೇರ್‌ಗೆ 4,000 ಬಲಿತ ಮೀನು ಮರಿಗಳನ್ನು ಹಾಗೂ 02 ಟನ್ ಕೃತಕ ಆಹಾರವನ್ನು ಖರೀದಿಸಲು ಘಟಕ ವೆಚ್ಚದ ಶೇ.50 ರಷ್ಟು ಹಾಗೂ ಗರಿಷ್ಠ 27,000 ರೂ.ಗಳನ್ನು ನೀಡಲಾಗುತ್ತಿದೆ.

2. **"ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ:** ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ. .

3. **ಮೀನು ಮರಿ ಖರೀದಿಗೆ ಸಹಾಯಧನ ಯೋಜನೆ:** ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/- ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/- ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನು ಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

4. **ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಗೆ ಪ್ರೋತ್ಸಾಹ:** ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುತ್ತಿದೆ.

5. **ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ :** ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನು ಮರಿ (Advanced fingerlings) ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳಲಾಗುತ್ತಿದೆ. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುತ್ತಿದೆ.

6. **ನೀಲಿ ಕ್ರಾಂತಿ / PMMSY ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (ಕೇಂದ್ರ ಪುರಸ್ಕೃತ ಯೋಜನೆ)**

   ಕೇಂದ್ರ ಸರ್ಕಾರದ ಸದರಿ ಯೋಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ಪಂಜರ ಕೃಷಿ, ಪೆನ್ ಮೀನು ಕೃಷಿ, RAS ಹಾಗೂ Biofloc ನಂತಹ ನೂತನ ತಂತ್ರಜ್ಞಾನಗಳನ್ನ ಅಳವಡಿಸಿರುವ ಫಲಾನುಭವಿಗಳಿಗೆ ಸಹಾಯಧನ ನೀಡಲಾಗುತ್ತಿದೆ.

7. ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:

ಸಾಂಪ್ರದಾಯಿಕ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮೆ ಎಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ.

8. ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟ ತೆರಿಗೆ ಮರುಪಾವತಿ

2021-22ನೇ ಸಾಲಿನಿಂದ ಯಾಂತ್ರೀಕೃತ ದೋಣಿಗಳಿಗೆ 1.5 ಲಕ್ಷ ಕಿಲೋಲೀಟರ್ ಡೀಸೆಲ್ ಡೆಲಿವರಿ ಪಾಯಿಂಟ್‌ನಲ್ಲಿಯೇ ಕರರಹಿತ ದರದಲ್ಲಿ ವಿತರಿಸುವುದು ಈ ಯೋಜನೆಯ ಉದ್ದೇಶವಾಗಿದೆ.

9. ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ

ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗುತ್ತಿದೆ. ಮೀನು ಮರಿಗಳನ್ನು ಹಿಡಿಯುವುದನ್ನು ತಪ್ಪಿಸಿ ಮತ್ಸ್ಯ ಸಂಪತ್ತನ್ನು ರಕ್ಷಿಸಲು ಮೀನುಗಾರರಿಗೆ ಕಾಡ್ ಎಂಡ್‌ನಲ್ಲಿ 35 ಎಂಎಂ ಸ್ಕ್ವೇರ್ ಮೆಶ್ ಬಲೆಗಳನ್ನು ಉಚಿತವಾಗಿ ನೀಡಲು ಉದ್ದೇಶಿಸಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗುತ್ತಿದೆ.

10. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ – ಜಿಲ್ಲಾ ಪಂಚಾಯತ್ ಯೋಜನೆ

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಹಾಗೂ ಮೊದಲ ವರ್ಷದ ಆವರ್ತಕ ವೆಚ್ಚದ ಶೇಕಡ 25 ರಷ್ಟು ಅಂದರೆ ಗರಿಷ್ಠ ರೂ.30,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ರೂ.10,000.00 ಗಳ ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.5000 ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 250 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುತ್ತಿದೆ.

11. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ:

ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ರಾಜ್ಯದ ಆಯ್ದ ಜಲಾಶಯ/ ಕೆರೆಗಳು/ ಖಸಗಿ ಕೋಳಗಲ್ಲಿ ಬೆರಳುದ್ದದ ಮೀನು ಮರಿ (Advanced fish fingerlings) ಮತ್ತು ಸಿಹಿ ನೀರು ಸೀಗಡಿ ಮರಿ ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಹಾಗೂ ಮೀನು ಉತ್ಪಾದನೆ ಹೆಚ್ಚಿಸ್ಲಲಾಗುತ್ತಿದೆ.

12. ಕೆರೆಗಳ ಅಭಿವೃದ್ಧಿ ಯೋಜನೆ :

ರಾಜ್ಯದಲ್ಲಿರುವ ಒಳನಾಡು ಜಲಸಂಪನ್ಮೂಲಗಳನ್ನು ಅಭಿವೃದ್ಧಿ ಪಡಿಸಲು ಹೊಸ ಗುತ್ತಿಗೆ ನಿಯಮಾವಳಿಗಳನ್ನು ರೂಪಿಸಿದ್ದು, ಈ ನಿಯಮಾವಳಿ ಪ್ರಕಾರ ಈ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕಿನ ಗುತ್ತಿಗೆಯನ್ನು ಪಡೆಯಲು ನೋಂದಾಯಿಸಲ್ಪಟ್ಟ ಮೀನುಗಾರರ ಸಹಕಾರ ಸಂಘಗಳಿಗೆ ಅವಕಾಶ ಕಲ್ಪಿಸಲಾಗಿದೆ. ಗುತ್ತಿಗೆಗೆ ಕೋರದ ಕೆರೆಗಳನ್ನು ಸಾರ್ವಜನಿಕವಾಗಿ ಟೆಂಡರ್ ಕಂ ಹರಾಜು ಮೂಲಕ ವಿಲೇವಾರಿ ಮಾಡಿ ಅಭಿವೃದ್ಧಿಪಡಿಸಲಾಗುವುದು. ಕೆರೆಗಳ ಶೇ.50ರ ಜಲ ವಿಸ್ತೀರ್ಣವನ್ನು ಗಣನೆಗೆ ತೆಗೆದುಕೊಂಡು ಪ್ರತಿ ಹೆಕ್ಟೇರ್ ಜಲ ವಿಸ್ತೀರ್ಣಕ್ಕೆ ರೂ.300/- ರಂತೆ ಹಾಗೂ ಹಿಂದಿನ 3 ವರ್ಷಗಳ ಸರಾಸರಿ ಗುತ್ತಿಗೆ ಮೊತ್ತ, ಇವುಗಳಲ್ಲಿ ಯಾವುದು ಹೆಚ್ಚೋ ಮೊತ್ತವನ್ನು ಗುತ್ತಿಗೆ ಮೊತ್ತವಾಗಿ ನಿಗದಿಪಡಿಸಿ ಗರಿಷ್ಠ 5 ವರ್ಷಗಳ ಅವಧಿಗೆ ಮೀನುಕೃಷಿಗೆ ನೀಡಲಾಗುತ್ತಿದೆ. ಮೀನುಗಾರಿಕೆ ಪಾಶುವಾರು ಹಕ್ಕುಗಳನ್ನು ಪಡೆದ ಫಲಾನುಭವಿಗಳು ಕೆರೆಗಳಲ್ಲಿ ಮೀನು ಮರಿಗಳನ್ನು ಸರಬರಾಜು ಮಾಡುತ್ತಾರೆ ಮತ್ತು ಆದ್ದರಿಂದ ಈ ಜಲಸಂಪನ್ಮೂಲಗಳ ಮೀನು ಉತ್ಪಾದನೆ ಹೆಚ್ಚಾಗುತ್ತದೆ.